# ಶಿಕ್ಷಕರ ಕಾರ್ಯಾಗಾರ

# “ಸರಳ ವಿಜ್ಞಾನ ಪ್ರಯೋಗಾಲಯ”

ದಿನಾಂಕ: 13.10.2023 ರಂದು **ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ** ಹಾಗೂ **ಅಜೀಂ ಪ್ರೇಮ್‌ಜಿ ಫೌಂಡೇಶನ್, ಬಾಗಲಕೋಟೆ** ಇವರ ಸಂಯುಕ್ತ ಆಶ್ರಯದಲ್ಲಿ **“ಸರಳ ವಿಜ್ಞಾನ ಪ್ರಯೋಗಾಲಯ”** ಎಂಬ ಶಿಕ್ಷಕರ ಕಾರ್ಯಾಗಾರವನ್ನು ಆಯೋಜಿಸಲಾಯಿತು, ಈ ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲೆಯ **ಒಟ್ಟು** 35 ವಿಜ್ಞಾನ ಶಿಕ್ಷಕರು ಭಾಗವಹಿಸಿದ್ದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ **ಡಾ. ಹೆಚ್.ಪಿ ಮಹೇಶ್ವರಪ್ಪ,** ಸಂಶೋಧನಾ ನಿರ್ದೇಶಕರು, ತೋ.ವಿ.ವಿ ಬಾಗಲಕೋಟೆ ಹಾಗೂ ಇತರ ಗಣ್ಯರು **ಸಸಿಗೆ ನೀರುಣಿಸುವ** ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಂದುವರೆದು, ಉದ್ಘಾಟಕರ ಭಾಷಣ ಮಾಡಿದ **ಡಾ. ಹೆಚ್.ಪಿ ಮಹೇಶ್ವರಪ್ಪ,** ಸಂಶೋಧನಾ ನಿರ್ದೇಶಕರು, ತೋ.ವಿ.ವಿ ಬಾಗಲಕೋಟೆ ರವರು, ವಿದ್ಯಾರ್ಥಿಗಳ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರದ ಮಹತ್ವವನ್ನು ತಿಳಿಸುತ್ತ, ಶಿಕ್ಷಕರು ಸದರಿ ಕಾರ್ಯಾಗಾರದ ಉಪಯೋಗವನ್ನು ಪಡೆದುಕೊಂಡು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವಂತೆ ಕರೆ ನೀಡಿದರು.

ತದನಂತರ, ಅಜೀಂ ಪ್ರೇಮ್‌ಜಿ ಪೌಂಡೇಶನ್‌ನ ವತಿಯಿಂದ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದಂತಹ, **ಶ್ರೀ ಶ್ರೀಕಾಂತ** ಹಾಗೂ **ಶ್ರೀ ಅರುಣಕುಮಾರ್** ರವರು ಶಿಕ್ಷಕರಿಗಾಗಿ ವಿವಿಧ ಚಟುವಟಿಕೆಗಳನ್ನು ನೀಡುವುದರ ಮೂಲಕ ಶಾಲಾ ವಾತಾವರಣದಲ್ಲಿ ಸರಳ ವಿಜ್ಞಾನ ಪ್ರಯೋಗಾಲಯವನ್ನು ನಿರ್ಮಿಸುವ ಬಗ್ಗೆ ಮಾಹಿತಿ ನೀಡಿದರು.

ಅದರಂತೆ, ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ವಿಜ್ಞಾನ ಶಿಕ್ಷಕರು ಎಲ್ಲ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸಿ, ತಾವು ಮಾಡಿದ ಚಡುವಟಿಕೆಗಳನ್ನು ವಿದ್ಯಾರ್ಥಿಗಳಿಗೆ ಸರಳ ರೀತಿಯಲ್ಲಿ ತಿಳಿಸುವ ಬಗ್ಗೆ ಸಂಪನ್ಮೂಲ ವ್ಯಕ್ತಿಗಳೊಂದಿಗೆ ಚರ್ಚಿಸುವ ಮೂಲಕ ವಿಸ್ತಾರವಾದ ಸಮಾಲೋಚನೆಯನ್ನು ನಡೆಸಿದರು.

ಕಾರ್ಯಕ್ರಮದ ಭಾಗವಾಗಿ, ಶಿಕ್ಷಕರಿಗೆ ಕೇಂದ್ರದಲ್ಲಿ ಸ್ಥಾಪಿಸಿರುವ ಒಳಾಂಗಣ ಮತ್ತು ಹೊರಾಂಗಣ ವಿಜ್ಞಾನ ಪ್ರದರ್ಶಿಕೆಗಳ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಯಿತು, ಸದರಿ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು **ಶ್ರೀ ಈರಣ್ಣಾ ಬುಳ್ಳಾ,** ಕ್ಯೂರೇಟರ್ ಹಾಗೂ **ಶ್ರೀ ಆಸೀಫ ಬಾಗವಾನ,** ತಾಂತ್ರಿಕ ಸಹಾಯಕರು, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ ರವರು ನಡೆಸಿಕೊಟ್ಟರು.

ಸದರಿ ಕಾರ್ಯಕ್ರಮವನ್ನು, **ಶ್ರೀ ಈರಣ್ಣ ಬುಳ್ಳಾ,** ಕ್ಯೂರೇಟರ್,ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ ರವರು ನಿರೂಪಿಸಿದರು ಹಾಗೂ **ಶ್ರೀ ಶ್ರೀಕಾಂತ,** ಸಂಪನ್ಮೂಲ ವ್ಯಕ್ತಿಗಳು, ಅಜೀಂ ಪ್ರೇಮ್‌ಜಿ ಫೌಂಡೇಶನ್, ಬಾಗಲಕೋಟೆ ರವರು ವಂದಿಸಿದರು.

ಮುಂದುವರೆದು, ಕಾರ್ಯಕ್ರಮದಲ್ಲಿ **ಶ್ರೀ ಗಂಗನಗೌಡ ಪಾಟೀಲ** ಸಹಾಯಕರು, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ ಹಾಗೂ ಅಜೀಂ ಪ್ರೇಮ್‌ಜಿ ಫೌಂಡೇಶನ್, ಬಾಗಲಕೋಟೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

































SCIENCE




LAZY COIN










ವಿಜ್ಞಾನ ಕೇಂದ್ರ ಬಾಗಲಕೋಟೆ

***********